<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,</u>
<u>ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು</u>

**Spl. C. No. 786/2025**

| ಸಾಕ್ಷಿಯ ಹೆಸರು | ಶ್ರೀ. ಶಂಕರ್ | ಚಾಸಾಃ | ಪ್ರಾಸಾಃ |
|---|---|---|---|
| ಗಂಡನ ಹೆಸರು | ಮರಿಯಪ್ಪ | 9 | 4 |
| ವಯಸ್ಸು | 58 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **10.08.2026.** | |
| ಉದ್ಯೋಗ | ಕೂಲಿ ಕೆಲಸ | | |
| ವಾಸ ಸ್ಥಳ | ದೊಮ್ಮರಹಳ್ಳಿ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಈಗ ನನಗೆ ತೋರಿಸಿದ ನಿಶಾನೆ.ಪಿ. 3 ರ ಮಹಜರ್ ನಲ್ಲಿ ನನ್ನ ಸಹಿ ಇದ್ದು ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 3 (ಬಿ) ಎಂದು ಗುರುತಿಸಲಾಯಿತು. ಸುಮಾರು 6 – 7 ವರ್ಷಗಳ ಹಿಂದೆ ಮಾದನಾಯಕನಹಳ್ಳಿ ಠಾಣೆಯ ಬಳಿ ಟಿ ಕುಡಿಯುತ್ತಿದ್ದಾಗ ಪೊಲೀಸರು ಕರೆಯಿಸಿ ನಿಶಾನೆ.ಪಿ. 3 ಕ್ಕೆ ಸಹಿ ಪಡೆದರು. ನಿಶಾನೆ.ಪಿ.3 ರ ಒಕ್ಕಣೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಲ್ಲ.

(ಈ ಸಾಕ್ಷಿಯನ್ನು ಅಭಿಯೋಜಕರು ಪ್ರತಿ ಕೂಲ ಸಾಕ್ಷಿ ಅಂತ ಪರಿಗಣಿಸಲು ಅನುಮತಿ ಕೇಳಿದ್ದು ಸಾಕ್ಷಿಯು ನೀಡಿದ್ದ ವ್ಯತಿರಿಕ್ತ ಹೇಳಿಕೆಯನ್ನು ಗಣನೆಗೆ ತೆಗೆದುಕೊಂಡು ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿನಾಂಕ 09.01.2018 ರಂದು ಪೊಲೀಸರು ನನ್ನನ್ನು ಮಾದನಾಯಕನಹಳ್ಳಿ ಠಾಣೆಯ ಕರೆಯಿಸಿ ಅಲ್ಲಿ ಅಪಹರಣಕ್ಕೆ ಒಳಗಾದ ಸೌಮ್ಯ ರವರ ಬ್ಯಾಗ್ ನಲ್ಲಿ ಇಟ್ಟಿದ್ದ ಒಡವೆಗಳನ್ನು ಪೊಲೀಸರು ನನ್ನ ಸಮಕ್ಷಮ ಮಹಜರ್ ಮಾಡಿ ವಶಕ್ಕೆ ಪಡೆದರು ಎಂದರೆ ಗೊತ್ತಿಲ್ಲ. ನನ್ನ ಜೊತೆಗೆ ಆ ಸಮಯದಲ್ಲಿ ಪಿರ್ಯಾದಿ ರವಿ ಹಾಗೂ ಶಿವಲಿಂಗ ರವರು ಇದ್ದರು ಎಂದರೆ ಸರಿ ಅಲ್ಲ. ಪೊಲೀಸರು ನಿಶಾನೆ.ಪಿ. 3

ರಂತೆ ಮಹಜರ್ ಮಾಡಿ ಓದಿ ಹೇಳಿದ ನಂತರ ಸಹಿ ಮಾಡಿದ್ದೇನೆ ಎಂದರೆ ಸರಿ ಅಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದೆರ ಸರಿ ಅಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಗೈರು ಹಾಜರು, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.